ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಕೊಡಗು ಜಿಲ್ಲೆಯ ನೆರೆಹಾವಳಿ ಬಗ್ಗೆ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿರುವ ವರದಿ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದಚುನಾಯಿತರಾದವರು):-

384 (411) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯ ಜನರು ಕಳೆದ 3 ವರ್ಷಗಳಿಂದ ಜಿಲ್ಲೆಯಲ್ಲಿ ಸತತವಾಗಿ ಸುರಿದ ಧಾರಾಕಾರ ಮಳೆ ಹಾಗೂ ಅದರ ಪರಿಣಾಮವಾಗಿ ಸಂಭವಿಸಿದ ಭೂಕುಸಿತದಿಂದಾಗಿ ತೀವ್ರ ಸಂಕಷ್ಟಕ್ಕೆ ಸಿಲುಕಿ ನಷ್ಟ ಅನುಭವಿಸುತ್ತಿರುವುದರ ಕುರಿತು ಕೇಂದ್ರ ಸರ್ಕಾರಕ್ಕೆ ಪರಿಣಾಮಕಾರಿಯಾದ ವರದಿಯನ್ನು ಸಲ್ಲಿಸಲಾಗಿದೆಯೇ ;

(ಆ) ಸಲ್ಲಿಸಿದ್ದಲ್ಲಿ, ಜಿಲ್ಲೆಯಲ್ಲಿನ ಜನರ ಸಂಕಷ್ಟದ ಪರಿಸ್ಥಿತಿ ಕುರಿತು ಕೇಂದ್ರ ಸರ್ಕಾರಕ್ಕೆ ಸೂಕ್ತ ಮಾಹಿತಿ ಹಾಗೂ ಆಗಿರುವ ನಷ್ಟದ ಅಂದಾಜನ್ನು ನಿಖರ ಅಂಕಿ-ಅಂಶಗಳೊಂದಿಗೆ ಮನದಟ್ಟು ಮಾಡಿಕೊಡಲಾಗಿದೆಯೇ ;

(ಇ) ಹಾಗಿದ್ದಲ್ಲಿ, ಆಗಿರುವ ನಷ್ಟದ ಅಂದಾಜನ್ನು ಸರಿದೂಗಿಸಲು ಬೇಕಾದ ಅನುದಾನವನ್ನು ಕೇಂದ್ರ ಸರ್ಕಾರದಿಂದ ಪಡೆಯಲಾಗಿದೆಯೇ ?